# ಕರ್ನಾಟಕ ವಿಧಾನ ಸಭೆ

| | |
|---|---|
| ಸದಸ್ಯರ ಹೆಸರು | ಶ್ರೀ ಛಲವಾದಿ ಟಿ ನಾರಾಯಣಸ್ವಾಮಿ (ವಿಧಾನ ಸಭೆಯಿಂದ ಚುನುಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 823 |
| ಉತ್ತರಿಸಬೇಕಾದ ದಿನಾಂಕ | 23.07.2024 |
| ಉತ್ತರಿಸುವ ಸಚಿವರು | ಮಾನ್ಯ ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು |

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದಲ್ಲಿ ಭ್ರಷ್ಟಾಚಾರ ನಡೆದಿರುವ ಕುರಿತು ತಾಂತ್ರಿಕ ಸಮಿತಿಯು ವರದಿಯನ್ನು ಸಲ್ಲಿಸಿದೆಯೇ; ಕಳೆದ 8 ತಿಂಗಳ ಹಿಂದೆಯೇ ಮುಡಾದಲ್ಲಿನ ನಿಯಮಬಾಹಿರ ಕ್ರಮಗಳು ಆದೇಶಗಳ ಉಲ್ಲಂಘನೆ ಪ್ರಕರಣಗಳು ಪ್ರಾಧಿಕಾರಕ್ಕೆ ಆಗಿರುವ ಆರ್ಥಿಕ ನಷ್ಟ ಇತ್ಯಾಧಿಗಳನ್ನು ದಾಖಲೆ ಸಮೇತ ತಾಂತ್ರಿಕ ಸಮಿತಿಯು ಸರ್ಕಾರಕ್ಕೆ ವರದಿಯನ್ನು ಸಲ್ಲಿಕೆ ಮಾಡಿರುವುದು ನಿಜವೇ; ಸಲ್ಲಿಸಿದ್ದಲ್ಲಿ, ವರದಿಯನುಸಾರ ಕ್ರಮ ಕೈಗೊಳ್ಳಬಹುದಿತ್ತಲ್ಲವೇ ಕ್ರಮ ತೆಗೆದುಕೊಳ್ಳಲು ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು; ಸದರಿ ತಾಂತ್ರಿಕ ಸಮಿತಿ ನೀಡಿರುವ ವರದಿಯಲ್ಲಿರುವ ಅಂಶಗಳೇನು; (ಮಾಹಿತಿ ನೀಡುವುದು)</td><td rowspan="2">ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಿವೇಶನ ಹಂಚಿಕೆಯಲ್ಲಿ ನಡೆದಿದೆ ಎನ್ನಲಾದ ಪ್ರಕರಣವು ಬೆಳಕಿಗೆ ಬಂದ ಹಿನ್ನಲೆಯಲ್ಲಿ ಸರ್ಕಾರದ ಅಧಿಸೂಚನೆ ಸಂಖ್ಯೆ: ಹೆಚ್‌ಡಿ 87 ಪಿಸಿಇ 2024, ದಿನಾಂಕ:14.07.2024 ರನ್ವಯ ಸದರಿ ಅಕ್ರಮದ ಬಗ್ಗೆ ವಿಚಾರಣೆ ನಡೆಸಲು ಗೌರವಾನ್ವಿತ ಮಾನ್ಯ ನಿವೃತ್ತ ನ್ಯಾಯಾಧೀಶರಾದ ಶ್ರೀ ಪಿ.ಎನ್. ದೇಸಾಯಿ ಇವರ ಅಧ್ಯಕ್ಷತೆಯಲ್ಲಿ ಏಕ ಸದಸ್ಯ ವಿಚಾರಣಾ ಆಯೋಗ ರಚಿಸಲಾಗಿದೆ. ಮಾನ್ಯ ಆಯೋಗದಲ್ಲಿ ವಿಚಾರಣಾ ಪ್ರಕ್ರಿಯೆಯು ಜಾರಿಯಲ್ಲಿದೆ. ನಂತರ ಸದರಿ ವರದಿಯನ್ನಾಧರಿಸಿ ನಿಯಮಾನುಸಾರ ಕ್ರಮ ಜರುಗಿಸಲಾಗುವುದು.</td></tr>
<tr><td>ಆ)</td><td>ತಾಂತ್ರಿಕ ಸಮಿತಿಯು ಈ ಹಿಂದೆಯೇ ಮಧ್ಯಂತರ ಮತ್ತು ಬಿಡಿ ನಿವೇಶನಗಳನ್ನು ಬದಲಿ ನಿವೇಶನಗಳನ್ನಾಗಿ ಹಂಚಿಕೆ ಮಾಡುತ್ತಿರುವುದನ್ನು ಪತ್ತೆ ಹಚ್ಚಿ, ಸರ್ಕಾರಕ್ಕೆ ವರದಿ ಮಾಡಿರುವುದು ನಿಜವೇ; ಅನುಮೋದಿತ ವ್ಯಾಪ್ತಿಯನ್ನು ಮೀರಿ ಬಡಾವಣೆಗಳನ್ನು ಬಿಟ್ಟಿರುವುದು ನಿಜವೇ; ಹರಾಜಿಗಾಗಿ ಬಾಕಿ ಇರುವ ಮೂಲೆ, ಬಿಡಿ ಮಧ್ಯಂತರ ನಿವೇಶನಗಳ ಮಾಹಿತಿಯು ಪ್ರತ್ಯೇಕವಾಗಿ ವಹಿಗಳಲ್ಲಿ ನಮೂದಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td></tr>
<tr><td>ಇ)</td><td>ಮುಡಾ ಬಡಾವಣೆಗಳ ನಿರ್ಮಾಣಕ್ಕೆ ಅನುಸರಿಸುತ್ತಿರುವ ಮಾನದಂಡಗಳೇನು; ಯಾವ ಆದೇಶಗಳಾನುಸಾರ ಕಾಯ್ದೆಗಳಾನುಸಾರ ಬಡಾವಣೆ ನಿರ್ಮಾಣಕ್ಕೆ ಕ್ರಮ ವಹಿಸುತ್ತಿದೆ; ಕೃಷಿ ಭೂಮಿಯನ್ನು ವಶಕ್ಕೆ ಪಡೆದು ಬಡಾವಣೆಗಳನ್ನು ನಿರ್ಮಿಸುವಲ್ಲಿ ರೂಪಿಸಿರುವ ನಿಯಮಗಳೇನು; ಪರಿಹಾರ ನೀಡಲು ಯಾವ ನಿಯಮಗಳನ್ನು ಅನುಸರಿಲಾಗುತ್ತಿದೆ; (ಸಂಪೂರ್ಣ ಮಾಹಿತಿ ನೀಡುವುದು)</td><td>ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ ಬಡಾವಣೆಗಳ ನಿರ್ಮಾಣಕ್ಕೆ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಕಾಯ್ದೆ 1987 ರಲ್ಲಿನ ಕಂಡಿಕೆ 15 ರಿಂದ 19 ರವರೆಗಿನ ಅಂಶಗಳನ್ನು ಅನುಸರಿಸಿ ಕ್ರಮವಹಿಸಲಾಗಿರುತ್ತದೆ.</td></tr>
</table>

| | | |
|---|---|---|
| ಈ) | ಇಲ್ಲಿಯವರೆಗೆ ಬಡಾವಣೆಗಳ ನಿರ್ಮಾಣಕ್ಕೆ ಎಷ್ಟು ಕೃಷಿ ಭೂಮಿಯನ್ನು ಮುಡಾ ವಶಕ್ಕೆ ಪಡೆದುಕೊಂಡು ಬಡಾವಣೆ ನಿರ್ಮಾಣ ಮಾಡಿದೆ; ಸದರಿ ಕೃಷಿ ಭೂಮಿಗಳ ಒಡೆತನ ಹೊಂದಿರುವವರಿಗೆ ಪರಿಹಾರ ರೂಪದಲ್ಲಿ ನಿವೇಶನಗಳ ಹಂಚಿಕೆ ಮಾಡಲಾಗಿದೆಯೇ; ಮಾಡಿದಲ್ಲಿ, ಯಾರಿಗೆ ಎಷ್ಟು ಹಂಚಿಕೆ ಮಾಡಲಾಗಿದೆ? (ವಿವರವಾದ ಮಾಹಿತಿ ನೀಡುವುದು) | ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಿವೇಶನ ಹಂಚಿಕೆಯಲ್ಲಿ ನಡೆದಿದೆ ಎನ್ನಲಾದ ಪ್ರಕರಣವು ಬೆಳಕಿಗೆ ಬಂದ ಹಿನ್ನಲೆಯಲ್ಲಿ ಸರ್ಕಾರದ ಅಧಿಸೂಚನೆ ಸಂಖ್ಯೆ: ಹೆಚ್‌ಡಿ 87 ಪಿಸಿಇ 2024, ದಿನಾಂಕ:14.07.2024 ರನ್ವಯ ಸದರಿ ಅಕ್ರಮದ ಬಗ್ಗೆ ವಿಚಾರಣೆ ನಡೆಸಲು ಗೌರವಾನ್ವಿತ ಮಾನ್ಯ ನಿವೃತ್ತ ನ್ಯಾಯಧೀಶರಾದ ಶ್ರೀ ಪಿ.ಎನ್. ದೇಸಾಯಿ ಇವರ ಅಧ್ಯಕ್ಷತೆಯಲ್ಲಿ ಏಕ ಸದಸ್ಯರ ವಿಚಾರಣಾ ಆಯೋಗ ರಚಿಸಲಾಗಿದೆ. ಮಾನ್ಯ ಆಯೋಗದಲ್ಲಿ ವಿಚಾರಣಾ ಪ್ರಕ್ರಿಯೆಯು ಜಾರಿಯಲ್ಲಿದೆ. ಮಾನ್ಯ ಆಯೋಗದ ವರದಿ ಸ್ವೀಕೃತವಾದ ನಂತರ ಸದರಿ ವರದಿಯನ್ನಾಧರಿಸಿ ನಿಯಮಾನುಸಾರ ಕ್ರಮ ಜರುಗಿಸಲಾಗುವುದು. |
| ಉ) | ಮುಡಾದಲ್ಲಿ ನಡೆದಿರುವ ಕ್ಯೋಟ್ಯಾತರ ರೂಪಾಯಿ ಹಗರಣ ತನಿಖೆಯನ್ನು ಕೈಗೊಳ್ಳಲು ಸರ್ಕಾರವು ಯಾವ ಕ್ರಮ ಕೈಗೊಂಡಿದೆ ತನಿಖೆಯು ಯಾವ ಹಂತದಲ್ಲಿದೆ; ಕೋಟ್ಯಾಂತರ ಈ ಹಗರಣವನ್ನು ಸಿಬಿಐ ತನಿಖೆಗೆ ಒಪ್ಪಿಸಿ ತಪ್ಪಿತಸ್ಥರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳಲು ಸರ್ಕಾರವು ಕ್ರಮ ವಹಿಸಬಹುದಲ್ಲವೇ; ಇಲ್ಲದಿದ್ದಲ್ಲಿ ಕಾರಣಗಳೇನು; | |
| ಊ) | ನಿವೇಶನ ಕೋರಿ ಸಾರ್ವಜನಿಕರಿಂದ ಮುಡಾಗೆ ಇಲ್ಲಿಯವರೆಗೆ ಎಷ್ಟು ಅರ್ಜಿಗಳನ್ನು ಸಲ್ಲಿಸಲಾಗಿದೆ; ಎಷ್ಟು ಅರ್ಜಿಗಳು ಬಾಕಿ ಇರುತ್ತವೆ; ಅರ್ಹರಿಗೆ ನಿವೇಶನ ನೀಡುವ ಬದಲು ಮುಡಾ ಅಧಿಕಾರಿಗಳು ಜನಪ್ರತಿನಿಧಿಗಳು ಬಂದಿದೆಯೇ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು? | |

ಕಡತ ಸಂಖ್ಯೆ :ನಅಇ 263 ಮೈಅಪ್ರಾ 2024(ಇ)

(ಬಿ.ಎಸ್ ಸುರೇಶ)
ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು